ಇ) ಸರ್ಕಾರ, ಅಫಿಷಿಯಲ್ ಸಮಿತಿ ರಚಿಸಿದ್ದು ಸಮಿತಿ ವರದಿ ಕೊಟ್ಟಿದೆ. ಇದರಲ್ಲಿ ಸಂಘಗಳ ಆರ್ಥಿಕ ಪರಿಸ್ಥಿತಿ ಅನುಗುಣವಾಗಿ ಸಿಬ್ಬಂದಿ ಸೇವಾ ಸೌಲಭ್ಯಗಳನ್ನು ಕೊಡಲು ಶಿಫಾರಸ್ಸು ಮಾಡಲಾಗಿದೆ. ಇದನ್ನು ಜಾರಿಗೆ ತರುವ ಬಗ್ಗೆ ಪರಿಶೀಲನೆಯಲ್ಲಿದೆ.

ಬೆಂಗಳೂರು ನಗರ ಸಾರಿಗೆ ಸಂಸ್ಥೆ ಅನುಭವಿಸಿರುವ ನಷ್ಟ?

3329 - ಶ್ರೀ ಎಲ್. ಆರ್ ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ನಗರ ಸಾರಿಗೆ ಸಂಸ್ಥೆಯ ಈವರೆಗೆ ಅನುಭವಿಸಿರುವ ನಷ್ಟದ ಮೊತ್ತವೆಷ್ಟು?*

ಆ) *ಬೆಂಗಳೂರು ನಗರ ಸಾರಿಗೆ ಸಂಸ್ಥೆಯನ್ನು ದೆಹಲಿ ಸಾರಿಗೆ ಸಂಸ್ಥೆಯ ಮಾದರಿಯಲ್ಲಿ ಖಾಸಗೀಕರಣಗೊಳಿಸಲು ಸರ್ಕಾರ ಯೋಚಿಸಿದೆಯೇ?*

ಇ) *ಬೆಂಗಳೂರು ನಗರ ಸಾರಿಗೆ ಸೇವೆಯನ್ನು ಉತ್ತಮಗೊಳಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?*

ಶ್ರೀ ಅಜೀಜ್ ಸೇತ್ (ಸಾರಿಗೆ ಸಚಿವರು) :

ಅ) 1989-90ರವರೆಗೆ 104.95 ಕೋಟಿ ರೂಪಾಯಿಗಳು.

ಆ) ಇಲ್ಲ.

ಇ)

1) ಅನುಸೂಚಿಗಳನ್ನು ಹೆಚ್ಚಿಸಲು ಹೆಚ್ಚುವರಿ ವಾಹನಗಳ ಸಂಖ್ಯೆಯನ್ನು ಕಡಿತಗೊಳಿಸಲಾಗುವುದು.

2) ೧೫೫ ಹೆಚ್ಚು ಬಸ್ಸುಗಳನ್ನು ಈ ವರ್ಷ ಸೇರಿಸಲಾಗುವುದು.

3) ವಿಶ್ರಾಂತಿ ಅವಧಿಯನ್ನು ಕಡಿಮೆಗೊಳಿಸಿ ಟ್ರಿಪ್‌ಗಳ ಸಂಖ್ಯೆಯನ್ನು ಹೆಚ್ಚಿಸಲಾಗುವುದು.

4) ಸಿಬ್ಬಂದಿಗಳ ಗುಣಮಟ್ಟವನ್ನು ಹೆಚ್ಚಿಸಲು ಅಲ್ಪಾವಧಿಯ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು.

5) ಹಣ ಸೋರುವಿಕೆಯನ್ನು ತಡೆಗಟ್ಟಲು ತನಿಖಾ ತಂಡದ ಕಾರ್ಯಚಟುವಟಿಯನ್ನು ಚುರುಕು ಗೊಳಿಸಲಾಗುವುದು.

6) ರಸ್ತೆಯನ್ನು ಚೆನ್ನಾಗಿಡುವಂತೆ ನೋಡಿಕಕೊಳ್ಳಲು ಮಹಾನಗರ ಪಾಲಿಕೆಯನ್ನು ಒಪ್ಪಿಸಲಾಗುವುದು.

7) ಕಛೇರಿ ಮತ್ತು ಶಾಲಾ ವೇಳೆಯನ್ನು ಹಂಚಲು ಸರ್ಕಾರವನ್ನು ಕೋರಲಾಗುವುದು.

ಆರ್. ಟಿ. ಓ. ಕಛೇರಿಗಳಲ್ಲಿ ಗಣಕೀಕರಣ

3325 - ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದ ಆರ್. ಟಿ. ಓ. ಕಛೇರಿಗಳಲ್ಲಿ ಗಣಕೀಕರಣದ ಕಾರ್ಯಕ್ರಮವನ್ನು ಎಷ್ಟು ಜಿಲ್ಲೆಗಳಿಗೆ ಪೂರೈಸಲಾಗಿದೆ?*

ಆ) *ಈ ಗಣಕೀಕರಣ ಕಾರ್ಯಕ್ರಮಗಳಿಗಾಗಿ ಸರ್ಕಾರ ಇವರೆಗೆ ವಿಚ್ಚು ಮಾಡಿದ ಹಣವೆಷ್ಟು?*

ಇ) *ಸಾರಿಗೆ ಇಲಾಖೆಯ ಕಾರ್ಯ ಚಟುವಟಿಕೆಗಳನ್ನು ಪ್ರತಿ ತಾಲ್ಲೂಕಿಗೂ ವಿಸ್ತರಿಸುವ ಯೋಜನೆ ಸರ್ಕಾರದ ಮುಂದಿದೆಯೇ?*

ಶ್ರೀ ಅಜೀಜ್ ಸೇತ್ (ಸಾರಿಗೆ ಸಚಿವರು) :

ಅ) ಸದ್ಯಕ್ಕೆ ಕರ್ನಾಟಕ ರಾಜ್ಯದ ಬೆಂಗಳೂರು ಜಿಲ್ಲೆಯ ಮೂರು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗಳಲ್ಲಿ ಗಣಕೀಕರಣದ ಕಾರ್ಯಕ್ರಮವನ್ನು ಪೂರೈಸಲಾಗಿದೆ.

ಆ) ರೂ. 18,65,639-50

ಇ) ಇನ್ನು ಮುಂದೆ ಇಡೀ ರಾಜ್ಯದಲ್ಲಿ ಹಂತಹಂತವಾಗಿ ವಿಸ್ತರಿಸಲಾಗುವುದು.

ಆಳಂದ ತಾಲ್ಲೂಕಿನ ಸಲ್ಲರ ಗ್ರಾಮದಲ್ಲಿ ಕಾಲೇಜು ಸ್ಥಾಪನೆ

3338 - ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸುಮಾರು ಹತ್ತು ಸಾವಿರ ಜನಸಂಖ್ಯೆಯುಳ್ಳ ಆಳಂದ ತಾಲ್ಲೂಕಿನ ಸಲ್ಲರ ಗ್ರಾಮಕ್ಕೆ ಕಾಲೇಜಿನ ಸೌಕರ್ಯವಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಆದಷ್ಟು ಬೇಗನೆ ಕಾಲೇಜು ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಲಾಗುವುದೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಈ ದಿಶೆಯಲ್ಲಿ ಯಾವುದೇ ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಬೇಡಿಕೆ : ಪ್ರಸ್ತಾವನೆಗಳು ಬಂದಲ್ಲಿ ಪರಿಶೀಲಿಸಲಾಗುವುದು.

ಬಸವ ಕಲ್ಯಾಣ ಪಟ್ಟಣದಲ್ಲಿ ಮಹಿಳಾ ಪದವಿ ಕಾಲೇಜು ಸ್ಥಾಪನೆ.

3339 - ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಪಟ್ಟಣದಲ್ಲಿ ಮಹಿಳಾ ಪದವಿ ಕಾಲೇಜನ್ನು ಪ್ರಾರಂಭಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಆ) ಈ ವಿಧಾನಸಭೆಯಲ್ಲಿ ಮಾನ್ಯ ಸಚಿವರು ಆಶ್ವಾಸನೆ ನೀಡಿದ್ದರೂ ಸಹ ಇದುವರೆಗೂ ಕ್ರಮ ಕೈಗೊಳ್ಳದಿರಲು ಕಾರಣಗಳೇನು?

ಇ) ಪ್ರಸ್ತುತ ವರ್ಷದಲ್ಲಿ ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? ಶೀಘ್ರದಲ್ಲಿಯೇ ಮೇಲ್ಕಂಡ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಬಸವಕಲ್ಯಾಣ ಪಟ್ಟಣದಲ್ಲಿ ಹಾಲಿ ಅನುಧಾನಿತ ಖಾಸಗಿ ಪ್ರಥಮ ದರ್ಜೆ ಕಾಲೇಜು ಇರುವುದರಿಂದ ಮಹಿಳಾ ಪದವಿ ಕಾಲೇಜನ್ನು ಮಂಜೂರು ಮಾಡುವ ಅಗತ್ಯತೆ ಇರುವುದಿಲ್ಲ.

ಆ) ಮಾನ್ಯ ಶಿಕ್ಷಣ ಸಚಿವರಿಂದ ಭರವಸೆಯನ್ನು ನೀಡಲಾಗಿರುವುದಿಲ್ಲ.

ಇ) 'ಅ' ಇದರಲ್ಲಿರುವ ಉತ್ತರದಿಂದ ಪ್ರಶ್ನೆ ಉದ್ಭವಿಸುವುದಿಲ್ಲ.